**JAIN COLLEGE**

463/465, 18th Main Road, SS Royal, 80 Feet Road, Rajarajeshwari Nagar,
Bangalore - 560 098

ದಿನಾಂಕ: /೧೨/೨೦೧೭ **ವಿಷಯ: ಕನ್ನಡ**

**ಪ್ರಥಮ ಪಿ.ಯು.ಸಿ.**

**MOCK PAPER**

**ಅವಧಿ – ೩.೦೦ ಗಂಟೆಗಳು** **ಗರಿಷ್ಠ ಅಂಕಗಳು – ೧೦೦**

---

**ಅ–ವಿಭಾಗ**

**I. ಎಲ್ಲಾ ಪ್ರಶ್ನೆಗಳಿಗೂ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ. 1x10=10**

೧. ದೇಹವೆಂಬುದು ಏನು ?

೨. ಲಕ್ಷ್ಮಣನ ಮಾತು ಕೇಳಿದ ಸೀತೆ ಭೂಮಿಗೆ ಯಾವ ರೀತಿ ಬಿದ್ದಳು?

೩. ಯಾರ ಮಕ್ಕಳನ್ನು ಮಾದೇವ ದತ್ತುವಾಗಿ ಪಡೆದನು?

೪. ಸಮಾಧಿಗಳು ಯಾರನ್ನು ಬಚ್ಚಿಟ್ಟುಕೊಂಡಿವೆ?

೫. ಶಾಸ್ತ್ರಿಮಾಸ್ತರ ಹೆಂಡತಿಯ ಹೆಸರೇನು?

೬. ರಂಗರಾವ್ ಸ್ಥಾಪಿಸಿದ ಸಂಸ್ಥೆಯ ಹೆಸರೇನು?

೭. ಬ್ರಿಟೀಷ್ ಸರಕಾರಕ್ಕೆ ತೆರಿಗೆ ಕಟ್ಟಬಾರದೆಂದು ಯಾರು ಹೇಳಿದರು?

೮. ಪಿಶಾಚಿಗಳು ಮನುಷ್ಯರನ್ನು ಯಾವುದರ ಮೂಲಕ ಪ್ರವೇಶಿಸುತ್ತವೆ?

೯. ಹುಡುಗಿಯರ ಹಾಡಿಗೆ ಬೋಳೆಶಂಕರ ಬಹುಮಾನವಾಗಿ ಏನನ್ನು ನೀಡಿದನು?

೧೦. ಅಣ್ಣಂದಿರಿಗೆ ಯಾವ ರೋಗ ಹಿಡಿದಿದೆ ಎಂದು ಬೋಳೆಶಂಕರ ಹೇಳುತ್ತಾನೆ?

**ಆ–ವಿಭಾಗ**

**II. ಅ. ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x4=8**

೧೧. ತನು ಮನ ಧನಗಳನ್ನು ಮರೆಯಲು ಏನನ್ನು ತೋರುತ್ತಾರೆ?

೧೨. ಸೀತೆಯನ್ನು ಕಾಡಿನ ಪ್ರಾಣಿಗಳು ಹೇಗೆ ಉಪಚರಿಸುತ್ತವೆ?

೧೩. ಚಿತ್ತದಾಸ್ಯ ಕಳೆಯಬೇಕಾಗಿರುವುದು ಯಾರು ಯಾರಿಗೆ?

೧೪. ಮಗು ಹಣ್ಣಿನಂಗಡಿಯಂತಾಗಬೇಕಾದುದು ಎಲ್ಲಿ ?

೧೫. ಧರೆಯ ಮೇಲಿನ ನಡಿಗೆ ಹಾಗೂ ಕರೆಯುವ ಧ್ವನಿ ಕವಿಗೆ ಹೇಗೆ ಭಾಸವಾಗುತ್ತಿದೆ?

**ಆ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x3=6**

೧೬. ಹುಡುಗನ ಯಾವ ಮಾತಿಗೆ ವೈದ್ಯಾಧಿಕಾರಿ ಬೆಪ್ಪಾಗಿ ಹೋದ?

೧೭. ಗೌತಮನ ಮನೋಲೋಕವನ್ನು ನಿರಂತರವಾಗಿ ದಹಿಸಿದ ಪ್ರಶ್ನೆಗಳು ಯಾವುವು?

೧೮. ಶಕುಂತಲೆ ತನ್ನ ಬದುಕು ಏನಾಗಿದೆ ಎಂದು ಯೋಚಿಸುತ್ತಾಳೆ?

೧೯. ಮಹಾದೇವನ ಉತ್ಸವಕ್ಕೆ ನಾಪಿತನು ತೆರಳಿದ ಉದ್ದೇಶವೇನು?

**ಇ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x3=6**

೨೦. ಸೈತಾನನು ಮೂರು ಪಿಶಾಚಿಗಳನ್ನು ಭೂಲೋಕಕ್ಕೆ ಕಳುಹಿಸಿದ್ದು ಏಕೆ?

೨೧. ಪಿಶಾಚಿಗಳು ಯಾವುದರಿಂದ ನಾಣ್ಯ ಮತ್ತು ಸಿಪಾಯಿಗಳನ್ನು ಮಾಡಿಕೊಡುತ್ತವೆ?

೨೨. ಬೆಟ್ಟದ ಮೇಲಿನ ದೇವತೆಯು ಬೋಳೆಶಂಕರನ ಅಣ್ಣ ಅತ್ತಿಗೆಯರಿಗೆ ಹೇಗೆ ಕಾಣಿಸುತ್ತದೆ?

೨೩. ಸೈತಾನನ ಆಗಮನವನ್ನು ಭಾಗವತ ಹೇಗೆ ತಿಳಿಸಿದ್ದಾನೆ?

## ಇ–ವಿಭಾಗ

**III. ಅ. ಯಾವುದಾದರೂ ಎರಡು ವಾಕ್ಯಗಳ ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 3x2=6**

೨೪. ಗಾಂಡಿವಿಯಲ್ತು ಪಿನಾಕಪಾಣಿಯುಂ ನೆರೆಯನ್

೨೫. ಆಹಾ ನಿಮ್ಮರಸುತನವನೆಮ್ಮಲ್ಲಿ ಮಾಳ್ಪರೇ

೨೬. ಸಲಹಿಕೊಂಬುದು ತನ್ನ ಮಾತೆಯಂ.

**ಆ. ಯಾವುದಾದರೂ ಒಂದು ವಾಕ್ಯ ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 3x1=3**

೨೭. ಅಡ್ಡ ಗೋಡೆಯ ಮೇಲೆ ದೀಪವಿಟ್ಟಂತೆ.

೨೮. ಬೆಳೆಯಲಿ ಬೆಳೆಯದಿರಲಿ ತೆರಿಗೆ ಕಡ್ಡಾಯವಾಯಿತು.

**ಇ. ಯಾವುದಾದರೂ ಒಂದು ವಾಕ್ಯ ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 3x1=3**

೨೯. ನಾನೇನಾದರೂ ರಾಜನಾದರೆ ನಿಮ್ಮಂಥ ಸೋಂಬೇರಿಗಳಿಗೆ ಊಟ ಹಾಕೋದೆ ಇಲ್ಲ

೩೦. ಚಿನ್ನ ತಿಂದು ಬದುಕಲಾಗುತ್ತ.

## ಈ–ವಿಭಾಗ

**IV. ಅ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿರಿ. 4x3=12**

೩೧. ಘಟ್ಟಿವಾಳಯ್ಯನ ವಚನಗಳ ಆಶಯವೇನು?

೩೨. ಕರಿಕಾಲ ಚೋಳ ಶಿವನನ್ನು ಅರ್ಚಿಸುತ್ತಿದ್ದ ರೀತಿಯನ್ನು ವಿವರಿಸಿ.

೩೩. ಮಗುವಿನ ವ್ಯಕ್ತಿತ್ವಕ್ಕೂ ಹಾಗೂ ಹಣ್ಣುಗಳಿಗೂ ಕವಿ ಹೇಗೆ ಸಂಬಂಧಗಳನ್ನು ಕಲ್ಪಿಸಿದ್ದಾನೆ? ವಿವರಿಸಿ.

೩೪. ದೇವರಿಗೊಂದು ಅರ್ಜಿ ಕವಿತೆಯ ಆಶಯವನ್ನು ವಿವರಿಸಿ.

**ಆ. ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 4x2=8**

೩೫. ಜ್ಯೋತಿಷ್ಯವು ಅರ್ಥಪೂರ್ಣವೋ–ಅರ್ಥರಹಿತವೋ ವಿಶ್ಲೇಷಿಸಿ.

೩೬. ಕಪಿಲವಸ್ತುವಿನ ಉದ್ಯಾನವದ ಬಗ್ಗೆ ಲೇಖಕರು ನೀಡುವ ವಿವರಗಳನ್ನು ಸಂಗ್ರಹಿಸಿ.

೩೭. ಪುರುಷ ಸಮಾಜದ ಬಗ್ಗೆ ಶಕುಂತಲೆಯ ನಿಲುವೇನು ?

**ಇ. ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 4x2=8**

೩೮. ರಾಜಕುಮಾರಿಯ ಹೊಟ್ಟೆನೋವು ಪ್ರಸಂಗದಿಂದ ಬೋಳೇಶಂಕರ ರಾಜನಾದ ಕಥೆಯನ್ನು ತಿಳಿಸಿ.

೩೯. ಸೈನಿಕರು ಏನೇನನ್ನು ನಾಶ ಮಾಡಿದರು ಎಂದು ಶಿವಪುರದ ಜನರು ಹೇಳುತ್ತಾರೆ ?

೪೦. ಹಸಿರೇ ಉಸಿರು ಎಂಬುದನ್ನು ಬೋಳೇಶಂಕರನ ಪಾತ್ರದ ಮೂಲಕ ನಾಟಕಕಾರರು ಹೇಗೆ ಸ್ಪಷ್ಟ ಪಡಿಸಿದ್ದಾರೆ? ವಿಮರ್ಶಿಸಿ

## ಉ–ವಿಭಾಗ

೧. **ಅ. ಯಾವುದಾದರೂ ಒಂದು ಪದ್ಯದ ಭಾವಾರ್ಥ ಬರೆಯಿರಿ.** **5x1=5**

೪೧. ಇರಿವ ಕೈದಿಂಗೆ ದಯಧರ್ಮದ ಮೊನೆ ಉಂಟೇ?
ಕಾಳೋರಗನ ದಾಡೆಯಲ್ಲಿ ಅಮೃತದ ಸುಧೆಯುಂಟೇ?
ಕೂಟವ ಕೂಡಿ ಸಮಯ ನೊಂದಲ್ಲಿ ಅಜಾತನ ಬಲ್ಲರೇ?
ಎನಗೆ ನಿಮ್ಮೊಳಗಿನ್ನೇತರ ಮಾತು?
ವೇಷಧಾರಿಗಳೆಲ್ಲ ನಿಮ್ಮ ಕೂಟಕ್ಕೆ ಹೊರಗು
ಚಿಕ್ಕಯ್ಯಪ್ರಿಯ ಸಿದ್ದಲಿಂಗ ಇಲ್ಲ ಇಲ್ಲ ಎಂದೆ.

ಅಥವಾ

೪೨. ಎಲೆ ವನಸ್ಥಳಗಳಿರ ವೃಕ್ಷಂಗಳಿರ ಮೃಗಂ
ಗಳಿರ ಕ್ರಿಮಿಕೀಟಂಗಳಿರ ಪಕ್ಷಿಗಳಿರ ಲತೆ
ಗಳಿರ ತೃಣಗುಲ್ಮಂಗಳಿರ ಪಂಚಭೂತಗಳಿರ ದೆಸೆಗಳಿರ ಕಾವುದು
ಎಲೆ ಧರ್ಮದೇವತೆ ಜಗಜ್ಜನನಿ ಜಾಹ್ನವಿಯೆ
ಸಲಹಿಕೊಂಬುದು ತನ್ನ ಮಾತೆಯಂ ಜಾನಕಿಯ
ನೆಲೆ ತಾಯೆ ಭೂದೇವಿ ನಿನ್ನ ಮಗಳಿಹಳೆಂದು ಸೌಮಿತ್ರಿ ಕೈಮುಗಿದನು

## ಭಾಷಾಭ್ಯಾಸ

ಅ. **ಈ ಕೆಳಗಿನ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ.** **2x6=12**

೪೩. ಈ ಪದಗಳಿಗೆ ಅರ್ಥ ಬರೆಯಿರಿ.
ಶಾರ್ದೂಲ ಧುರ

೪೪. ಈ ಪದಗಳಿಗೆ ನಾನಾರ್ಥ ಬರೆಯಿರಿ.
ಬಗೆ ನರ

೪೫. ಈ ಪದಗಳಿಗೆ ವಿರುದ್ಧ ಪದ ಬರೆಯಿರಿ
ಜೀವ ಅಪರಿಚಿತ

೪೬. ಈ ಪದಗಳನ್ನು ಬಿಡಿಸಿ ಬರೆಯಿರಿ
ಕಾವೇರಿ ಗುಪ್ತಾರಾಧನೆ

೪೭. ಈ ನುಡಿಗಟ್ಟಗಳನ್ನು ಉಪಯೋಗಿಸಿ ವಾಕ್ಯಗಳನ್ನು ರಚಿಸಿ
ಅಡಿಪಾಯ ಮೊರೆಹೋಗು

೪೮. ಎರಡು ಜೋಡುಪದಗಳನ್ನು ಬರೆಯಿರಿ

೪೯. ಈ ಪದಗಳಿಗೆ ತದ್ಭವ ರೂಪ ಬರೆಯಿರಿ
ಆಶ್ಚರ್ಯ ಜನ್ಮ

ಆ. **ಯಾವುದಾದರೂ ಒಂದನ್ನು ಕುರಿತು ಪ್ರಬಂಧ ಬರೆಯಿರಿ.** **5x1=5**

೫೦. ಪ್ರಸ್ತುತ ರೈತರ ಸಮಸ್ಯೆಗಳು

೫೧. ಸಮಾಜದ ಬೆಳವಣಿಗೆಯಲ್ಲಿ ಮಾಧ್ಯಮಗಳ ಪಾತ್ರ.

ಇ. **ಪತ್ರಲೇಖನ : ಯಾವುದಾದರೂ ಒಂದನ್ನು ಕುರಿತು ಪತ್ರ ಬರೆಯಿರಿ.** **4**

೫೨. ನಿಮ್ಮ ಕಾಲೇಜಿನಲ್ಲಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಕುರಿತು ನಿಮ್ಮ ಗೆಳೆಯ/ಗೆಳತಿಗೆ ಪತ್ರ ಬರೆಯಿರಿ.

೫೩. ವರ್ಗಾವಣೆ ಪತ್ರವನ್ನು ನೀಡುವಂತೆ ಕೋರಿ ನಿಮ್ಮ ಕಾಲೇಜಿನ ಪ್ರಾಂಶುಪಾಲರಿಗೊಂದು ಪತ್ರ ಬರೆಯಿರಿ.

**ಈ. ಈ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ.** **4**

ಜಳ. ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೆ?

ಜಜ. ಮಾಡಿದುಣ್ಣೋ ಮಹಾರಾಯ.

*********************************